# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1402
ಸದಸ್ಯರ ಹೆಸರು : ಶ್ರೀ ಎಸ್.ವ್ಹಿ.ಸಂಕನೂರ

ಉತ್ತರಿಸುವ ದಿನಾಂಕ : 22-08-2025.
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಂಬಂಧ ನೇಮಕಗೊಂಡು ನ್ಯಾಯಮೂರ್ತಿ ಶ್ರೀ ನಾಗಮೋಹನ್ ದಾಸ್ ವರದಿ ಸಲ್ಲಿಕೆಯಾಗಿದೆಯೇ; ಆಗಿದ್ದಲ್ಲಿ, ಯಾವ ದಿನಾಂಕದಂದು ಸಲ್ಲಿಕೆ ಆಗಿದೆ ಮತ್ತು ಸರ್ಕಾರ ಕೈಗೊಂಡ ಕ್ರಮಗಳೇನು; | ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಂಬಂಧ ಸರ್ಕಾರದಿಂದ ನೇಮಿಸಲಾದ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ\|\| ಹೆಚ್.ಎನ್. ನಾಗಮೋಹನ್ ದಾಸ್ ರವರ ಏಕಸದಸ್ಯ ವಿಚಾರಣಾ ಆಯೋಗದ ವತಿಯಿಂದ ದಿನಾಂಕ:04-08-2025 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲಾಗಿರುತ್ತದೆ. ಸದರಿ ವರದಿ ಕುರಿತು ದಿನಾಂಕ:19-08-2025 ರಂದು ಜರುಗಿದ ವಿಶೇಷ ಸಚಿವ ಸಂಪುಟ ಸಭೆಯ ನಿರ್ಧಾರಗಳನ್ನು ಈಗಾಗಲೇ ಸನ್ಮಾನ್ಯ ಮುಖ್ಯಮಂತ್ರಿಯವರು ವಿಧಾನ ಮಂಡಲದಲ್ಲಿ ಹೇಳಿಕೆ ನೀಡಿರುತ್ತಾರೆ. ಅದರಂತೆ ಒಳಮೀಸಲಾತಿಯನ್ನು ಅನುಷ್ಠಾನ ಮಾಡಲು ತೀರ್ಮಾನಿಸಲಾಗಿದೆ. ಒಳಮೀಸಲಾತಿ ಕುರಿತಂತೆ ಆದೇಶ ಹೊರಡಿಸುವ ಹಂತದಲ್ಲಿದ್ದು, ಆದೇಶ ಹೊರಡಿಸಿದ ನಂತರ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಸಚಿವ ಸಂಪುಟದ ನಿರ್ಣಯದಂತೆ ಕ್ರಮವಹಿಸಲಾಗುವುದು. |
| ಆ) | ರಾಜ್ಯ ಸರ್ಕಾರ ಶಿಕ್ಷಣ ಕೃಷಿ ಹಾಗೂ ವಿವಿಧ ಇಲಾಖೆಗಳಲ್ಲಿ ನೇಮಕ ಹೊಂದಬೇಕಾದ ಸುಮಾರು 60,000 ಸಾವಿರ ಹುದ್ದೆಗಳ ಪ್ರಕ್ರಿಯೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಳೆದ 15 ವರ್ಷಗಳಿಂದ ನಿವೃತ್ತಿ ಆಗಿರುವ ಹುದ್ದೆಗಳ ಒಳ ಮೀಸಲಾತಿ ವರ್ಗೀಕರಣ ಹಿನ್ನಲೆಯಲ್ಲಿ ಒಂದು ಹುದ್ದೆಯನ್ನು ತುಂಬಿಕೊಳ್ಳದೇ ಇರುವ ಪರಿಸ್ಥಿತಿ ನಿರ್ಮಾಣ ಆಗಿರುವುದು ಸರ್ಕಾರ ಗಮನಿಸಿದೆಯೇ; | |
| ಈ) | ಪರಿಶಿಷ್ಟ ಜಾತಿ ಒಳ ಮೀಸಲಾತಿಯನ್ನು ಸರ್ಕಾರ ಯಾವ ಅವಧಿಯಲ್ಲಿ ಇತ್ಯರ್ಥ ಪಡಿಸಿ ಸರ್ಕಾರಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ನೇಮಕಾತಿ ಪ್ರಕ್ರಿಯೆ ಚಾಲನೆ ಮಾಡಲಾಗುವುದು ಈ ಕುರಿತು ಸರ್ಕಾರದ ಸ್ಪಷ್ಟ ಹೇಳಿಕೆ ಏನು? | |

**No: SWD/472/SLP/2025**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.